**ದಿನಾಂಕಃ 03.12.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀಸವಾಲುಃ ಆರೋಪಿಗಳ ಪರ ವಕೀಲರಿಂದಃ –**

2. ಚಾಸಾ.1 ನನ್ನ ಪಕ್ಕದ ಮನೆಯವರಾಗಿರುತ್ತಾರೆ. ಚಾಸಾ.1 ರವರು ನನಗೆ ಮಹಜರ್ ಗೆ ಸಹಿ ಮಾಡಲು ಕೇಳಿಕೊಂಡಿದ್ದು, ನಾನು ಸಹಿ ಮಾಡಿರುತ್ತೇನೆ ಎಂದರೆ ಸಾಕ್ಷಿಯೂ ಕೊಲೆಯಾಗಿರುತ್ತದೆ ಎಂದು ನಾನು ಹೋದಾಗ ಅಲ್ಲಿ ದಾಖಲೆಗೆ ಸಹಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಸಹಿ ಮಾಡಿದ ದಾಖಲೆಯಲ್ಲಿ ಏನು ಬರೆದಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ ಎಂದರೆ ಸರಿ. ನಾನು ಸಹಿ ಮಾಡುವ ಕಾಲಕ್ಕೆ ನಿಪಿ.2 ರಲ್ಲಿಯ ದಾಖಲೆಯ ಪುಟ ಸಂಖ್ಯೆ 4 ರಲ್ಲಿ ಏನು ಬರೆದಿರಲಿಲ್ಲ ಎಂದರೆ ಸರಿ. ಸದರಿ ದಾಖಲೆ ಎಷ್ಟು ಪುಟಗಳ ದಾಖಲೆ ಇತ್ತು ನನಗೆ ತಿಳಿದಿರುವುದಿಲ್ಲ ಎಂದರೆ ಸರಿ. ಸದರಿ ದಾಖಲೆಗೆ ಸಹಿ ಮಾಡಿರುವುದನ್ನು ಬಿಟ್ಟು ಬೇರೆ ಯಾವುದೇ ಹೇಳಿಕೆಯನ್ನು ಪೊಲೀಸರಿಗೆ ನೀಡಿರುವುದಿಲ್ಲ.

3. ನಾನು ಬೆಳಗ್ಗೆ ಎದ್ದು ಛತ್ರದಲ್ಲಿ ಗಲಾಟೆಯಾದ ವಿಚಾರ ತಿಳಿದು ಅಲ್ಲಿ ಹೋಗಿ ನೋಡಿದಾಗ ಜನರು ದಿದ್ದುವನ್ನು ಹಿಡಿದು ಕಂಬಕ್ಕೆ ಕಟ್ಟಿ ಹಾಕಿದ್ದು, ಛತ್ರದ ಒಳಗಡೆ ಹೆಣ ಬಿದ್ದಿತ್ತು. ಹಿಂದಿನ ದಿನ ರಾತ್ರಿ ಅಲ್ಲಿ ಗಲಾಟೆಯಾಗಿರುವ ವಿಚಾರ ನನಗೆ ತಿಳಿದು ಬಂತು ಎಂದು ಹೇಳಿರುವ ವಿಚಾರಗಳನ್ನು ಮೊದಲ ಬಾರಿ ನ್ಯಾಯಾಲಯದ ಮುಂದೆ ಹೇಳಿರುತ್ತೇನೆ ಎಂದರೆ ಸರಿ. ಸದರಿ ಸ್ಥಳದಲ್ಲಿ ಜನರು ದಿದ್ದುವನ್ನು ಕಂಬಕ್ಕೆ ಕಟ್ಟಿ ಹಾಕಿರುವುದಿಲ್ಲ, ಆರೋಪಿ ಅಲ್ಲಿ ಇರಲೇ ಇಲ್ಲ ಎಂದರೆ ಸರಿಯಲ್ಲ. ನಿಪಿ.2 ದಾಖಲೆಗೆ ಎಲ್ಲಿ ಸಹಿ ಮಾಡಿರುತ್ತೀರಿ ಎಂದರೆ ಸಾಕ್ಷಿಯೂ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಸದರಿ ಸ್ಥಳದಿಂದ ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ತೆಗೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ.3 ರಲ್ಲಿ ಇರುವ ಪೋಟೋಗಳನ್ನು ಸೃಷ್ಟಿ ಮಾಡಲಾಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಪೋಟೋಗಳನ್ನು ಮಹಜರ್ ಕಾಲದಲ್ಲಿ ತೆಗೆದ ಪೋಟೋಗಳು ಆಗಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಸ್ಥಳದಲ್ಲಿ ಯಾವುದೇ ಮಹಜರ್ ಮಾಡಿರುವುದಿಲ್ಲ

ಎಂದರೆ ಸರಿಯಲ್ಲ. ನಾನು ಚಾಸಾ.1 ರವರ ಪಕ್ಕದ ಮನೆಯವರಾಗಿದ್ದರಿಂದ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಎ ಒ

3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು.